ಇರುತ್ತದೆ. ಈ ಕುರಿತು ನಿಯಮಾನುಸಾರ ಪ್ರಸ್ತಾವನೆಯನ್ನು ಪೂರ್ಣ ವಿವರಗಳೊಂದಿಗೆ ಸಲ್ಲಿಸಲು ಉಪ ಅರಣ್ಯ ಸಂರಕ್ಷಣಾಧಿಕಾರಿ, ಹಾಸನ ವಿಭಾಗ, ಹಾಸನ ರವರಿಗೆ ಈಗಾಗಲೇ ಅಗತ್ಯ ಸೂಚನೆಗಳನ್ನು ನೀಡಲಾಗಿದೆ. ಅರಣ್ಯ ಜಮೀನನ್ನು ಬಿಡುಗಡೆ ಮಾಡಲು ಅರಣ್ಯ ಜಮೀನಿಗೆ ಬದಲಿಯಾಗಿ ಪರಿಹಾರಾತ್ಮಕ ನೆಡುತೋಪು ಬೆಳೆಸಲು 3.60 ಹೆ. 'ಸಿ ಮತ್ತು ಡಿ' ವರ್ಗದ ಜಮೀನನ್ನು ಅರಣ್ಯ ಇಲಾಖೆಗೆ ವರ್ಗಾಯಿಸಿ ಇಂಡೀಕರಣಗೊಳಿಸಿ ಕೊಡುವಂತೆ ಉಪ ಅರಣ್ಯ ಸಂರಕ್ಷಣಾಧಿಕಾರಿ, ಹಾಸನ ರವರು ದಿನಾಂಕ 14-3-2011ರ ಪತ್ರದಲ್ಲಿ ಜಿಲ್ಲಾಧಿಕಾರಿ ಹಾಸನ ಜಿಲ್ಲೆ ಹಾಸನ ಇವರನ್ನು ಕೋರಿರುತ್ತಾರೆ. ನಂತರ ವಿವರವಾದ ಪ್ರಸ್ತಾವನೆಯನ್ನು ತಯಾರಿಸಿ ಕೇಂದ್ರ ಸರ್ಕಾರದ ಮಂಜೂರಾತಿಗಾಗಿ ಸಲ್ಲಿಸಲು ಕ್ರಮ ಕೈಗೊಳ್ಳಲಾಗುವುದು.

ಲಂಡನ್‌ನಲ್ಲಿ ಬಸವ ಪುತ್ಥಳಿ ಸ್ಥಾಪನೆ

05 (22) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ): ಮಾನ್ಯ ಕನ್ನಡ ಮತ್ತು ಸಂಸ್ಕೃತಿ, ಸಣ್ಣನೀರಾವರಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಲಂಡನ್‌ನಲ್ಲಿ ಬಸವ ಪುತ್ಥಳಿಯನ್ನು ನಿರ್ಮಿಸಲು ರಾಜ್ಯ ಸರ್ಕಾರವು 3 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದೆಯೇ;

ಆ) ಹಾಗಿದ್ದಲ್ಲಿ, ಲಂಡನ್‌ನ ಯಾವ ಸ್ಥಳದಲ್ಲಿ ಈ ಪುತ್ಥಳಿಯನ್ನು ನಿರ್ಮಿಸಲಾಗುವುದು ಹಾಗೂ ಇಲ್ಲಿಯವರೆಗೆ ಯಾವ ಯಾವ ರೀತಿಯ ಅನುಮತಿಯನ್ನು ಯಾರಿಂದ ಪಡೆದುಕೊಳ್ಳಲಾಗಿದೆ ಹಾಗೂ ಸ್ಥಳಕ್ಕೆ ಯಾರು ಯಾರು ಭೇಟಿ ನೀಡಿ ಪರಿಶೀಲನೆ ನಡೆಸಿರುತ್ತಾರೆ;

ಇ) ಈ ಮೂರ್ತಿ ನಿರ್ಮಾಣ ಹಾಗೂ ಪ್ರತಿಷ್ಠಾಪನೆಯ ಕೆಲಸದ ಗುತ್ತಿಗೆಯನ್ನು ಯಾರಿಗೆ ವಹಿಸಲಾಗಿದೆ; ಇದಕ್ಕಾಗಿ ಇಲ್ಲಿಯವರೆವಿಗೆ ವೆಚ್ಚ ಮಾಡಿರುವ ಹಣವೆಷ್ಟು ಹಾಗೂ ಇಲ್ಲಿಯವರೆವಿಗೆ ಈ ವಿಷಯದಲ್ಲಿ ಸಾಧಿಸಿರುವ ಪ್ರಗತಿ ಏನು;

ಈ) ಇನ್ನು ಎಷ್ಟು ಸಮಯದೊಳಗೆ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಲಾಗುವುದು?

ಶ್ರೀ ಗೋವಿಂದ ಎಂ. ಕಾರಜೋಳ (ಕನ್ನಡ ಮತ್ತು ಸಂಸ್ಕೃತಿ, ಸಣ್ಣನೀರಾವರಿ ಹಾಗೂ ಜವಳಿ ಸಚಿವರು):

ಅ) ರೂ.3.00 ಕೋಟಿ ಬಿಡುಗಡೆಗೆ ಅನುಮೋದನೆಯಾಗಿದ್ದು, ಮೊದಲನೇ ಕಂತಾಗಿ ರೂ.1.50 ಕೋಟಿಯನ್ನು ಬಿಡುಗಡೆ ಮಾಡಲು ಆದೇಶಿಸಲಾಗಿದೆ.

ಆ) ಲಂಡನ್ ನಗರದ ಲ್ಯಾಂಬೆಥ್‌ನಲ್ಲಿ ಶ್ರೀ ಬಸವೇಶ್ವರ ಪುತ್ಥಳಿಯನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ. 'ದಿ ಬಸವೇಶ್ವರ ಫೌಂಡೇಶನ್, ಲಂಡನ್' ಸಂಸ್ಥೆಯವರು ಸ್ಥಳ ಗುರುತಿಸಿದ್ದು ಪುತ್ಥಳಿ ನಿರ್ಮಿಸಲು ಸ್ಥಳೀಯ ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆದುಕೊಳ್ಳಲು ಸೂಚಿಸಲಾಗಿದೆ. ಲ್ಯಾಂಬೆಥ್‌ನ ಕರ್ನಾಟಕ ಮೂಲಕ ನಿಕಟಪೂರ್ವ ಮೇಯರ್‌ರವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿರುತ್ತಾರೆ.

ಇ) ಪುತ್ಥಳಿ ನಿರ್ಮಾಣ ಹಾಗೂ ಪ್ರತಿಷ್ಠಾಪನೆಯ ಪ್ರಕ್ರಿಯೆಯು ಚಾಲನೆಗೊಂಡಿದೆ.

ಈ) ಮೇಲಿನಂತೆ.

ಭುವನೇಶ್ವರಿ ಮೂರ್ತಿ ಸ್ಥಾಪನೆ

08 (25) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ): ಮಾನ್ಯ ಕನ್ನಡ ಮತ್ತು ಸಂಸ್ಕೃತಿ, ಸಣ್ಣನೀರಾವರಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ಯಾವ ಸ್ಥಳದಲ್ಲಿ ಭುವನೇಶ್ವರಿ ಮೂರ್ತಿಯನ್ನು ಸ್ಥಾಪಿಸಲಾಗುವುದು;

ಆ) ಇದಕ್ಕಾಗಿ ವೆಚ್ಚ ಮಾಡಲಿರುವ ಹಣವೆಷ್ಟು ಹಾಗೂ ಪ್ರಸಕ್ತ ಆಯವ್ಯಯದಲ್ಲಿ ಇದಕ್ಕಾಗಿ ಎಷ್ಟು ಹಣವನ್ನು ಒದಗಿಸಲಾಗಿದೆ;

ಇ) ಈ ವಿಷಯದಲ್ಲಿ ಇಲ್ಲಿಯವರೆಗೆ ಸಾಧಿಸಿರುವ ಪ್ರಗತಿ ಏನು?

ಶ್ರೀ ಗೋವಿಂದ ಎಂ. ಕಾರಜೋಳ (ಕನ್ನಡ ಮತ್ತು ಸಂಸ್ಕೃತಿ, ಸಣ್ಣ ನೀರಾವರಿ ಹಾಗೂ ಜವಳಿ ಸಚಿವರು):

ಅ) ಸೂಕ್ತ ಸ್ಥಳ ಗುರುತಿಸುವ ಪ್ರಕ್ರಿಯೆ ಚಾಲನೆಯಲ್ಲಿದೆ.

ಆ) 2011–12ನೇ ಸಾಲಿನ ಆಯವ್ಯಯದಲ್ಲಿ ಈ ಉದ್ದೇಶಕ್ಕಾಗಿ ರೂ.25 ಕೋಟಿ ಮೀಸಲಿಡಲಾಗಿದೆ.

ಇ) ಸ್ಥಳ ನಿಗದಿಯಾದ ಕೂಡಲೇ ಕ್ರಮ ಕೈಗೊಳ್ಳಲಾಗುವುದು.